ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1572
ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	24.09.2021.
ಉತ್ತರಿಸುವ ಸಚಿವರು	:	ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಹಾವೇರಿ ಜಿಲ್ಲೆಯಲ್ಲಿ ಬೆಂಬಲ ಬೆಲೆ ಅಡಿಯಲ್ಲಿ ಭತ್ತ ಖರೀದಿ ಕೇಂದ್ರಗಳ ಮೂಲಕ ಖರೀದಿಸಲ್ಪಟ್ಟ ಭತ್ತಕ್ಕೆ 03 ದಿನಗೊಳಗಾಗಿ ರೈತರ ಖಾತೆಗೆ ಹಣವನ್ನು ಜಮಾ ಮಾಡಬೇಕೆನ್ನುವುದು ಸರ್ಕಾರದ ನಿಯಮವೇ:	ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತವನ್ನು ನೊಂದಾಯಿತ ಅಕ್ಕಿ ಗಿರಣಿಗಳ ಮೂಲಕ ಸಂಗ್ರಹಿಸಲಾಗುತ್ತದೆ. ರೈತರಿಂದ ಖರೀದಿಸಲಾದ ಭತ್ತದ ವಿವರವನ್ನು ಅಕ್ಕಿ ಗಿರಣಿ ಮಾಲೀಕರು ಸಂಗ್ರಹಣಾ ಏಜೆನ್ಸಿಗಳಿಗೆ ನೀಡಿದ ಮೂರು ದಿನಗಳೊಳಗಾಗಿ ರೈತರ ಬ್ಯಾಂಕ್ ಖಾತೆಗೆ ಹಣವನ್ನು ವರ್ಗಾವಣೆ ಮಾಡಬೇಕಾಗಿರುತ್ತದೆ.
(ಆ)	ಹಾಗಿದ್ದಲ್ಲಿ, ಹಾವೇರಿ ಜಿಲ್ಲೆಯಲ್ಲಿ ಬೆಂಬಲ ಬೆಲೆ ಅಡಿಯಲ್ಲಿ ಭತ್ತ ಖರೀದಿ ಕೇಂದ್ರಗಳ ಮೂಲಕ ಖರೀದಿಸಲ್ಪಟ್ಟ ಭತ್ತಕ್ಕೆ ಕಳೆದ 03 ತಿಂಗಳಾದರೂ ರೈತರ ಖಾತೆಗೆ ಹಣ ಜಮೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಹಾವೇರಿ ಜಿಲ್ಲೆಯಲ್ಲಿ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ 2150 ರೈತರಿಂದ 1,15,059.67 ಕ್ವಿಂಟಾಲ್ ಭತ್ತವನ್ನು ಖರೀದಿಸಲಾಗಿದ್ದು ಎಲ್ಲಾ 2150 ರೈತರಿಗೆ ರೂ.21.56 ಕೋಟಿ ಮೊತ್ತವನ್ನು ಡಿ.ಬಿ.ಟಿ ಮೂಲಕ ಪಾವತಿಸಲಾಗಿರುತ್ತದೆ.
(ಇ)	ಹಾವೇರಿ ಜಿಲ್ಲೆಯಲ್ಲಿ ಬೆಂಬಲ ಬೆಲೆ ಅಡಿಯಲ್ಲಿ ಭತ್ತ ಖರೀದಿ ಕೇಂದ್ರಗಳ ಮೂಲಕ ಖರೀದಿಸಲ್ಪಟ್ಟ ಭತ್ತಕ್ಕೆ ಹಣವನ್ನು ರೈತರ ಖಾತೆಗೆ ಜಮೆ ಮಾಡಲು ಸರ್ಕಾರಕ್ಕೆ ಬೇಕಾಗುವ ಕಾಲಾವಕಾಶವೆಷ್ಟು?	ಉದ್ಭವಿಸುವುದಿಲ್ಲ.

ಆನಾಸ 91 ಆರ್‌ಪಿಆರ್ 2021 (ಇ-ಆಫೀಸ್)

(ಉಮೇಶ್ ವಿ. ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು